# ಕರ್ನಾಟಕ ವಿಧಾನ ಪರಿಷತ್ತು

| | |
|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | 105 (114) |
| ಮಾನ್ಯ ಸದಸ್ಯರ ಹೆಸರು | ಶ್ರೀ ನಸೀರ್ ಅಹ್ಮದ್ (ವಿಧಾನ ಸಭೆಯಿಂದ ಚುನಾಯಿತರಾದವರು) |
| ಉತ್ತರಿಸಬೇಕಾದ ದಿನಾಂಕ | 13.02.2023 |
| ಉತ್ತರಿಸುವ ಸಚಿವರು | ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಹಾಗೂ ವೈದ್ಯಕೀಯ ಶಿಕ್ಷಣ ಸಚಿವರು |

| ಕ್ರ. ಸಂ. | ಪ್ರಶ್ನೆ | ಉತ್ತರ |
|---|---|---|
| ಅ | ರಾಜ್ಯ ಸರ್ಕಾರಿ ನೌಕರರು ತನ್ನ ತಂದೆ/ತಾಯಿ ಕೋವಿಡ್-19 ನಿಂದ ತುತ್ತಾಗಿ ಸರ್ಕಾರಿ ಆಸ್ಪತ್ರೆಯಲ್ಲಿ ಬೆಡ್ ಸಿಗದೆ ತುರ್ತು ಮತ್ತು ಅನಿವಾರ್ಯವಾಗಿ ಸರ್ಕಾರದಿಂದ ಮಾನ್ಯತೆ ಪಡೆದಿರುವ ಖಾಸಗಿ ಆಸ್ಪತ್ರೆಯಲ್ಲಿ ಚಿಕಿತ್ಸೆ ಕೊಡಿಸಿ, ಚಿಕಿತ್ಸೆ ಫಲಕಾರಿಯಾಗದೇ ಮರಣ ಹೊಂದಿದ್ದಲ್ಲಿ ಅಂತಹ ಸರ್ಕಾರಿ ನೌಕರನಿಗೆ ಸದರಿ ಚಿಕಿತ್ಸಾ ವೆಚ್ಚವನ್ನು ಸರ್ಕಾರದಿಂದ ಮರು ಪಾವತಿಸಲಾಗುವುದೇ; ಹೌದಾದಲ್ಲಿ ಎಷ್ಟು ಪ್ರಕರಣಗಳಲ್ಲಿ ಈ ರೀತಿಯ ಚಿಕಿತ್ಸಾ ವೆಚ್ಚ ಮರುಪಾವತಿ ಮಾಡಲಾಗಿದೆ; (ಸಂಪೂರ್ಣ ವಿವರ ಒದಗಿಸುವುದು) | ಕೋವಿಡ್-19 ಪೀಡಿತರಿಗೆ ಸುವರ್ಣ ಆರೋಗ್ಯ ಸುರಕ್ಷಾ ಟ್ರಸ್ಟ್ ವತಿಯಿಂದ ಉಚಿತವಾಗಿ ಚಿಕಿತ್ಸೆಯನ್ನು ನೀಡಲಾಗಿರುತ್ತದೆ.<br><br>ಸರ್ಕಾರಿ ನೌಕರರ ತಂದೆ ತಾಯಿ ಕೋವಿಡ್‌ನಿಂದ ಮರಣ ಹೊಂದಿದ ಚಿಕಿತ್ಸಾ ವೆಚ್ಚವನ್ನು ಮರುಪಾವತಿಸಿರುವ ಯಾವುದೇ ಪ್ರಕರಣಗಳು ಇರುವುದಿಲ್ಲ. |
| ಆ | ಸರ್ಕಾರಿ ನೌಕರನ ತಂದೆ/ ತಾಯಿ ಕೋವಿಡ್-19 ನಿಂದ ಮರಣ ಹೊಂದಿದ್ದಲ್ಲಿ ವೈದ್ಯಕೀಯ ವೆಚ್ಚ ಮರುಪಾವತಿ ಕೋರಲು ಕಾಲಮಿತಿಯನ್ನು ನಿಗಧಿಪಡಿಸಲಾಗಿದೆಯೇ; ಹಾಗಿದ್ದಲ್ಲಿ ಎಷ್ಟು ದಿನಗಳ ಅವಧಿಯೊಳಗೆ ಮರುಪಾವತಿ ಕೋರಲು ಅವಕಾಶವಿದೆ; ಅನಿವಾರ್ಯ ಕಾರಣಗಳಿಂದ ವಿಳಂಬವಾಗಿ ಸಲ್ಲಿಸುವ ಮರುಪಾವತಿ ಮನವಿಗಳನ್ನು ವಿಶೇಷ ಪ್ರಕರಣದಲ್ಲಿ ಪರಿಗಣಿಸಲು ಸಾಧ್ಯವಿದೆಯೇ; (ಸಂಪೂರ್ಣ ವಿವರದೊಂದಿಗೆ ಮಾಹಿತಿ ನೀಡುವುದು) | ಸರ್ಕಾರದ ಆದೇಶ ಸಂಖ್ಯೆ: ಆಇ 01 ಟಿಎಫ್‌ಸಿ 2012 ದಿನಾಂಕ:23.07.2012 ರಲ್ಲಿ ಸರ್ಕಾರಿ ನೌಕರರ ವೈದ್ಯಕೀಯ ವೆಚ್ಚ ಮರುಪಾವತಿ ಕೋರಲು ಆರು ತಿಂಗಳ ಕಾಲಮಿತಿಯನ್ನು ನೀಡಿ ಆದೇಶಿಸಲಾಗಿರುತ್ತದೆ. ಆರು ತಿಂಗಳ ನಂತರ ಬಾಕಿ ಕ್ಲೇಮುಗಳನ್ನು ಸಲ್ಲಿಸಿದಾಗ, ನೌಕರನು ಕಾಲವಿಳಂಬಕ್ಕೆ ಸಮರ್ಪಕ ಕಾರಣವನ್ನು ಒದಗಿಸಿದ್ದಲ್ಲಿ, ಮಾತ್ರ ನಿಯಂತ್ರಣಾಧಿಕಾರಿಯು ಅವುಗಳನ್ನು ಅಂಗೀಕರಿಸಿದರೆ 'ಅವುಗಳ ಸಂದಾಯಕ್ಕೆ ಕರ್ನಾಟಕ ಆರ್ಥಿಕ ಸಂಹಿತೆ 18 ಮತ್ತು 20 ರ ಅನುಚ್ಛೇದಗಳ ಉಪಬಂಧಗಳು ಅನ್ವಯವಾಗುತ್ತದೆ |

**ಆಕುಕ 06 ಎಸ್‌ಬಿವಿ 2023**

**(ಡಾ. ಕೆ ಸುಧಾಕರ್)**
ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಹಾಗೂ
ವೈದ್ಯಕೀಯ ಶಿಕ್ಷಣ ಸಚಿವರು